**<u>ದಿನಾಂಕಃ 21.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.</u>**

**<u>ಪಿರ್ಯಾದುದಾರರ ಸ್ವ ಪ್ರಮಾಣೀಕೃತ ಹೇಳಿಕೆಃ</u>**

ನಾನು ಪಿರ್ಯಾದುದಾರನಾಗಿದ್ದು, ನನ್ನ ಸ್ವ ಪ್ರಮಾಣೀಕೃತ ಹೇಳಿಕೆಯ ಪ್ರತಿಜ್ಞಾ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ನಿಜ ಇರುತ್ತದೆ.

ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆ.

1) ದಿನಾಂಕ 30.10.2025 ರ ಚೆಕ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ಸಹಿಯನ್ನು ಆರೋಪಿಯ ಸಹಿ ಎಂದು ಗುರುತಿಸುತ್ತಾರೆ, ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

2) ದಿನಾಂಕ 30.10.2025 ರಂದು ಬ್ಯಾಂಕ್ ರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3) ದಿನಾಂಕ 08.11.2025 ರಂದು ವಕೀಲರ ಮೂಲಕ ಆರೋಪಿಗೆ ನೀಡಿದ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

4) ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು, ನಿಪಿ-4 ಎಂದು ಗುರುತಿಸಲಾಯಿತು.

5) ಎರಡು ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-5 ಮತ್ತು ನಿಪಿ-6 ಎಂದು ಗುರುತಿಸಲಾಯಿತು.

**ಮರುವಿಚಾರಣೆಃ ಇಲ್ಲ.**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು)**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಸಿ/ಸಿ 1 ನೇ ಹೆಚ್ಚುವರಿ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**